**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ರವರು ನಿಯಮ-72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ**

**ವಿಷಯ:** **ಮಂಗಳೂರು ಪೊಲೀಸ್ ಕಮಿಷನರೇಟ್ ಮತ್ತು ಜಿಲ್ಲಾ ಪೊಲೀಸ್ ಅಧೀಕ್ಷಕರ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ಮಾರಾಟ ಬಹಳ ಜಾಸ್ತಿಯಾಗುತ್ತಿದ್ದು, ಇದರ ಪರಿಣಾಮದಿಂದಾಗಿ ಅನೇಕ ಕೊಲೆಗಳು ಸಾವುಗಳು ಸಂಭವಿಸುತ್ತಿರುವ ಬಗ್ಗೆ**

**ಹೇಳಿಕೆ :** ಮಂಗಳೂರು ಪೊಲೀಸ್ ಕಮಿಷನರೇಟ್ ಮತ್ತು ಜಿಲ್ಲಾ ಪೊಲೀಸ್ ಅಧೀಕ್ಷಕರ ವ್ಯಾಪ್ತಿಯಲ್ಲಿ ವಿಶೇಷ ಕಾರ್ಯಾಚರಣೆಯನ್ನು ನಡೆಸುವ ಮೂಲಕ ಮಾದಕ ವಸ್ತುಗಳ ಹಾವಳಿಯನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿದೆ. ಮಂಗಳೂರು ನಗರ ಪೊಲೀಸ್ ಕಮೀಷನರೇಟ್ ಮತ್ತು ಜಿಲ್ಲಾ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ಪರಿಣಾಮದಿಂದಾಗಿ ಯಾವುದೇ ಕೊಲೆಗಳು, ಸಾವುಗಳು ಸಂಭವಿಸಿರುವುದಿಲ್ಲ.

ಮಾದಕ ವಸ್ತುಗಳ ಮಾರಾಟ ಮತ್ತು ಸೇವನೆ ಕುರಿತಂತೆ ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ಮಂಗಳೂರು ಪೊಲೀಸ್ ಕಮಿಷನರೇಟ್‌ನ ಮತ್ತು ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಂದರೆ, 2017, 2018, 2019 ಮತ್ತು 2020 (29, ಫೆಬ್ರವರಿ) ರವರೆಗೆ ದಾಖಲಿಸಿದ್ದು, ಆರೋಪಿಗಳನ್ನು ಬಂಧಿಸಲಾದ ವಿವಿರ ಈ ಕೆಳಕಂಡಂತಿದೆ.

| **ಮಾದಕ ವಸ್ತುಗಳ ಮಾರಾಟದ ಕುರಿತು ದಾಖಲಾದ ಪ್ರಕರಣಗಳ ಸಂಖ್ಯೆ (2020ನೇ ಫೆಬ್ರವರಿ ಅಂತ್ಯದವರೆಗೆ)** | | | |
|---|---|---|---|
| ವರ್ಷ | ದಾಖಲಾದ ಪ್ರಕರಣಗಳ ಸಂಖ್ಯೆ | ದಸ್ತಗಿರಿಯಾದ ಆರೋಪಿತರುಗಳ ಸಂಖ್ಯೆ | ಶಿಕ್ಷೆಯಾದ ಪ್ರಕರಣಗಳ ಸಂಖ್ಯೆ |
| 2017 | 81 | 130 | 6 |
| 2018 | 51 | 99 | 0 |
| 2019 | 71 | 136 | 5 |
| 2020 | 06 | 08 | 0 |
| **ಮಾದಕ ವಸ್ತುಗಳ ಸೇವನೆಯ ಕುರಿತು ದಾಖಲಾದ ಪ್ರಕರಣಗಳ ಸಂಖ್ಯೆ (2020ನೇ ಫೆಬ್ರವರಿ ಅಂತ್ಯದವರೆಗೆ)** | | | |
| 2017 | 197 | 258 | 131 |
| 2018 | 147 | 206 | 73 |
| 2019 | 164 | 244 | 62 |
| 2020 | 17 | 28 | 0 |

ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವನೆಯನ್ನು ನಿಯಂತ್ರಿಸಲು ಮತ್ತು ತಡೆಗಟ್ಟಲು ಮಂಗಳೂರು ನಗರ ಮತ್ತು ಜಿಲ್ಲೆಯ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿರುವ ಶಾಲೆಗಳಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ವಿದ್ಯಾರ್ಥಿಗಳು ಯಾವ ರೀತಿ ಮಾದಕ ದ್ರವ್ಯಗಳಿಂದ ದೂರವಿರಬೇಕು ಎಂಬ ಬಗ್ಗೆ ಇದನ್ನು ಬಳಸುವುದರಿಂದ ಆರೋಗ್ಯದ ಮೇಲೆ ಉಂಟಾಗುವ ಪರಿಣಾಮಗಳು ಮತ್ತು ಮಾರಾಟ ಮತ್ತು ಸೇವನೆಗಳಿಂದ ದಾಖಲಾಗುವ ಕ್ರಿಮಿನಲ್ ಪ್ರಕರಣಗಳಿಂದ ವಿದ್ಯಾರ್ಥಿಗಳ ಭವಿಷ್ಯದಲ್ಲಿ ಉಂಟಾಗುವ ಸಮಸ್ಯೆ ಮತ್ತು ಕಾನೂನು ಕ್ರಮಗಳ ಬಗ್ಗೆ ತಿಳಿಸಲಾಗಿದೆ.

ವಿದ್ಯಾರ್ಥಿಗಳನ್ನು ಮಾದಕ ಪದಾರ್ಥಗಳ ಬಳಕೆಯಿಂದ ದೂರವಿರುವ ಜೊತೆಗೆ ಮಾದಕ ಪದಾರ್ಥಗಳನ್ನು ಸರಬರಾಜು ಮಾಡುವ ವ್ಯಕ್ತಿಗಳು/ಸಂಶಯಿತರು ಕಂಡುಬಂದಲ್ಲಿ ಗೌಪ್ಯವಾಗಿ ಮಾಹಿತಿಯನ್ನು ಪೊಲೀಸರಿಗೆ ನಿರ್ಭೀತಿಯಿಂದ ತಿಳಿಸುವಂತೆ ಮನವರಿಕೆಯನ್ನು ಮಾಡಿಕೊಡಲಾಗಿದೆ.

ಸಾರ್ವಜನಿಕರು ಮಾದಕ ವಸ್ತುಗಳ ಮಾರಾಟ, ಸಾಗಾಣೆ ಮತ್ತು ಸೇವನೆ ಮಾಡುವವರ ಹಾಗೂ ಇತರ ಡ್ರಗ್ಸ್ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ರಹಸ್ಯ ಮಾಹಿತಿ/ದೂರು ನೀಡಲು ಇಲಾಖಾ ವತಿಯಿಂದ ಸಾರ್ವಜನಿಕರಿಗೆ ಅನುಕೂಲವಾಗುವಂತೆ **4 ಅಂಕಿಗಳ 1908 ಎಂಬ ಟೋಲ್ ಫ್ರೀ** ದೂರವಾಣಿ ಸೇವೆಯನ್ನು ಪ್ರಾರಂಭಿಸಲಾಗಿದೆ.

ಮಂಗಳೂರು ನಗರ ಪೊಲೀಸ್ ಕಮೀಷನರೇಟ್ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಕೊನಾಮಿಕ್ & ನಾರ್ಕೋಟಿಕ್ ಕ್ರೈಂ ಪೊಲೀಸ್ ಠಾಣೆಯನ್ನು ತೆರೆದು ಅದಕ್ಕೆ ಸುರಿತ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ.

ಬೀಟ್ ಮೀಟಿಂಗ್, ಜನ ಸಂಪರ್ಕ ಸಭೆ, ಸಿಟಿಜನ್ ಕಮಿಟಿ ಸಭೆಗಳಲ್ಲಿಯೂ ಸಹ ಈ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.

ಒಇ 07 ಪಿಎನ್‌ಡಿ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು